ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2016-17 ದಿನಾಂಕ: 18-08-2016

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ಸಶಸ್ತ್ರ ಪೊಲೀಸ್ ತರಬೇತಿ ಶಾಲೆ ವತಿಯಿಂದ 4ನೇ ತಂಡದ ಸಿವಿಲ್ ಪೊಲೀಸ್ ಕಾನ್ಸ್‌ಟೇಬಲ್‌ಗಳ ಪಥಸಂಚಲನ:<br><br>ಮುಖ್ಯ ಅತಿಥಿ:<br><br>ಡಾ. ಜಿ. ಪರಮೇಶ್ವರ್<br>ಗೃಹ ಮಂತ್ರಿಗಳು | 19-08-2016<br>ಶುಕ್ರವಾರ<br>ಬೆಳಿಗ್ಗೆ<br>9-00 ಗಂಟೆಗೆ | ಪೊಲೀಸ್ ಕವಾಯತು ಮೈದಾನ, ಯಲಹಂಕ, ಬೆಂಗಳೂರು. |
| 2. | ಕರ್ನಾಟಕ ವಿಧಾನ ಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ ಪ್ರಾರಂಭಿಕ ಸಭೆ.<br><br>ಅಧ್ಯಕ್ಷತೆ:<br><br>ಕೆ. ಶಿವಮೂರ್ತಿ,<br>ಅಧ್ಯಕ್ಷರು,<br>ಕರ್ನಾಟಕ ವಿಧಾನ ಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿ. | 19-08-2016<br>ಶುಕ್ರವಾರ<br>ಬೆಳಿಗ್ಗೆ<br>11-00 ಗಂಟೆಗೆ | ಸಮ್ಮೇಳನ ಸಭಾಂಗಣ, ಶಾಸಕರ ಭವನ – 2, ಬೆಂಗಳೂರು. |

| | | | |
|---|---|---|---|
| 3. | ರಾಜ್ಯ ಮಟ್ಟದ ಗುತ್ತಿಗೆ ಪೌರಕಾರ್ಮಿಕರ ಸಮಾವೇಶ.<br><br>**ಉದ್ಘಾಟನೆ:**<br><br>ಸಿದ್ದರಾಮಯ್ಯ,<br>ಮುಖ್ಯಮಂತ್ರಿಗಳು,<br><br>**ಅಧ್ಯಕ್ಷತೆ:**<br><br>ಡಾ. ಜಿ. ಪರಮೇಶ್ವರ್,<br>ಗೃಹ ಮಂತ್ರಿಗಳು<br><br>**ವರದಿ ಬಿಡುಗಡೆ:**<br><br>ಎಚ್. ಆಂಜನೇಯ,<br>ಸಮಾಜ ಕಲ್ಯಾಣ ಸಚಿವರು | 19-08-2016<br>ಶುಕ್ರವಾರ<br>ಬೆಳಿಗ್ಗೆ<br>11-00 ಗಂಟೆಗೆ | ಅರಮನೆ ಆವರಣ<br>(ವೈಟ್ ಪೆಟಲ್),<br>ಗೇಟ್ ನಂ 02 ಮತ್ತು 03,<br>ಬೆಂಗಳೂರು ನಗರ, |

ನಿರ್ದೇಶಕರ ಪರವಾಗಿ

**ಪತ್ರಿಕಾ ಪ್ರಕಟಣೆ**

# ಅರಸು ಜನ್ಮಶತಮಾನೋತ್ಸವ:
# ಹಿಂದುಳಿದ ವರ್ಗದ ವಿದ್ಯಾರ್ಥಿಗಳಿಗೆ ಬಂಪರ್ ಕೊಡುಗೆ

**ಬೆಂಗಳೂರು, ಆಗಸ್ಟ್ 18 (ಕರ್ನಾಟಕ ವಾರ್ತೆ)**

ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಅಭಿವೃದ್ಧಿಯ ಹರಿಕಾರ, ಸಾಮಾಜಿಕ ಪರಿವರ್ತನೆಯ ತುಡಿತದ ಮಾಜಿ ಮುಖ್ಯಮಂತ್ರಿ ದಿವಂಗತ ಡಿ. ದೇವರಾಜ ಅರಸು ಅವರ ಜನ್ಮಶತಮಾನೋತ್ಸವ ವರ್ಷದ ಸಮಾರೋಪದ ಸವಿ ನೆನಪಿಗಾಗಿ ರಾಜ್ಯ ಸರ್ಕಾರ ಹಿಂದುಳಿದ ವರ್ಗದ ವಿದ್ಯಾರ್ಥಿಗಳಿಗಾಗಿ ಬಂಪರ್ ಕೊಡುಗೆಗಳನ್ನು ನೀಡಿದೆ.

ವಿಧಾನ ಸೌಧದ ಸಮ್ಮೇಳನ ಸಭಾಂಗಣದಲ್ಲಿ ಇಂದು ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಖಾತೆ ಸಚಿವ ಹೆಚ್. ಆಂಜನೇಯ ಅವರು ಪತ್ರಿಕಾಗೋಷ್ಠಿಯಲ್ಲಿ ವಿವರಗಳನ್ನು ಪ್ರಕಟಿಸಿದರು.

ರಾಜ್ಯದ ಎಲ್ಲಾ 2408 ಹಿಂದುಳಿದ ವರ್ಗದ ವಿದ್ಯಾರ್ಥಿನಿಲಯಗಳನ್ನು 'ಡಿ. ದೇವರಾಜ ಅರಸು ವಿದ್ಯಾರ್ಥಿನಿಲಯ' ಎಂದು ನಾಮಕರಣ ಮಾಡಿ ಆದೇಶ ಹೊರಡಿಸಿದೆ, ಇದರ ಜೊತೆಯಲ್ಲಿ

'ಡಿ. ದೇವರಾಜ ಅರಸು ವಿದೇಶಿ ವ್ಯಾಸಂಗ ವೇತನ' ಆರಂಭಿಸಿದ್ದು ಪ್ರಸಕ್ತ ಸಾಲಿನಲ್ಲಿ 99 ಹಿಂದುಳಿದ ವರ್ಗದ ವಿದ್ಯಾರ್ಥಿಗಳಿಗೆ ತಲಾ ಗರಿಷ್ಠ 10 ಲಕ್ಷ ರೂ. ನೀಡಲಾಗಿದೆ.

ಹಿಂದುಳಿದ ವರ್ಗದ ಆಯ್ದ 600 ಪಿಎಚ್‌ಡಿ ವಿದ್ಯಾರ್ಥಿಗಳಿಗಾಗಿ ಮಾಸಿಕ 5000/- ರೂ ಶಿಷ್ಯವೇತನ ನೀಡುವ ಮೂಲಕ ಉನ್ನತ ಶಿಕ್ಷಣಕ್ಕೆ ಪ್ರೋತ್ಸಾಹ ನೀಡಲು ಉದ್ದೇಶಿಸಲಾಗಿದೆ. ಪ್ರತಿಭಾವಂತ ಹಿಂದುಳಿದ ವರ್ಗದ ಪದವಿ/ಸ್ನಾತಕೋತ್ತರ 2500 ವಿದ್ಯಾರ್ಥಿಗಳಿಗೆ ಡಿ. ದೇವರಾಜ ಅರಸು ಪ್ರತಿಭಾ ಪುರಸ್ಕಾರ ಅಡಿಯಲ್ಲಿ 10 ಸಾವಿರ ರೂ. ದಿಂದ 25 ಸಾವಿರ ರೂ.ವರೆಗೆ ಪ್ರೋತ್ಸಾಹಧನವನ್ನು ನೀಡಲಾಗುವುದು.

ಬಾಬು/ಜಡಿ/ಕೆಎಂ

# ಅರಸು ಶತಮಾನೋತ್ಸವ ಭವನ ನಿರ್ಮಾಣ

**ಬೆಂಗಳೂರು, ಆಗಸ್ಟ್ 18 (ಕರ್ನಾಟಕ ವಾರ್ತೆ)**

7 ಕೋಟಿ ರೂ ವೆಚ್ಚದಲ್ಲಿ ಅರಸು ಶತಮಾನೋತ್ಸವ ನೆನಪಿಗಾಗಿ ಅವರು ಬೆಳೆದ ಊರು ಕಲ್ಲಳ್ಳಿಯಲ್ಲಿ ಕಟ್ಟಿಸಲಾಗುವುದು ಮತ್ತು ಹಳ್ಳಿಯ ಅಭಿವೃದ್ಧಿಗಾಗಿ 10 ಕೋಟಿ ರೂ. ಅವರ ಹುಟ್ಟೂರು ಬೆಟ್ಟದ ತುಂಗ ಗ್ರಾಮಕ್ಕೂ ಸಹ 10 ಕೋಟಿ ರೂ ಅನುದಾನ ಬಿಡುಗಡೆ ಮಾಡಲಾಗಿದೆ.

ವಿಧಾನ ಸೌಧದ ಸಮ್ಮೇಳನ ಸಭಾಂಗಣದಲ್ಲಿ ಇಂದು ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಖಾತೆ ಸಚಿವ ಹೆಚ್. ಆಂಜನೇಯ ಅವರು ಪತ್ರಿಕಾಗೋಷ್ಠಿಯಲ್ಲಿ ಈ ವಿಷಯವನ್ನು ತಿಳಿಸಿದರು.

ಬಾಬು/ಜಡಿ/ಕೆಎಂ

# ದಿವಂಗತ ಅರಸು ಜನ್ಮ ಶತಮಾನೋತ್ಸವ ಸಮರೋಪ ಸಮಾರಂಭ

**ಬೆಂಗಳೂರು, ಆಗಸ್ಟ್ 18 (ಕರ್ನಾಟಕ ವಾರ್ತೆ)**

ಕರ್ನಾಟಕ ಸರ್ಕಾರದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಮ್ಮಿಕೊಂಡಿದ್ದ ಡಿ. ದೇವರಾಜ ಅರಸು ಅವರ ಜನ್ಮ ಶತಮಾನೋತ್ಸವ ವರ್ಷದ ಸಮಾರೋಪ ಸಮಾರಂಭವನ್ನು ಈ ತಿಂಗಳ 20 ರಂದು ನಗರದ ಕಂಠೀರವ ಒಳಾಂಗಣ ಕ್ರೀಡಾಂಗಣದಲ್ಲಿ ಬೆಳಗ್ಗೆ 11 ಗಂಟೆಗೆ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಲಿದ್ದಾರೆ. ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವ ಹೆಚ್. ಆಂಜನೇಯ ಅಧ್ಯಕ್ಷತೆಯನ್ನು ವಹಿಸಲಿದ್ದಾರೆ ಎಂದು ಸಚಿವ ಎಚ್. ಆಂಜನೇಯ ತಿಳಿಸಿದರು.

ಅರಸು ಜನ್ಮ ಶತಮಾನೋತ್ಸವ ಸಮಾರೋಪ ಸಮಾರಂಭ ಮತ್ತು ಜನ್ಮ ಶತಮಾನೋತ್ಸವಕ್ಕಾಗಿ ಸರ್ಕಾರ ಹಮ್ಮಿಕೊಂಡಿದ್ದ ಕಾರ್ಯಕ್ರಮಗಳ ವಿವರ ಕುರಿತು ಇಂದು ವಿಧಾನಸೌದದಲ್ಲಿ ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವ

ಹೆಚ್. ಆಂಜನೇಯ ಶತಮಾನೋತ್ಸವ ಪ್ರಯುಕ್ತ ಕಳೆದ 2015 ಆಗಸ್ಟ್ ರಿಂದ ಪ್ರಸಕ್ತ ಆಗಸ್ಟ್ ವರೆಗೆ ಸರ್ಕಾರ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿತ್ತು, ಅದರಲ್ಲಿ ಮುಖ್ಯವಾಗಿ ಅರಸು ಅವರ ವಿಚಾರಧಾರೆ, ಸಾಧನೆಗಳು ಹಾಗೂ ಅವರ ಸಾಮಾಜಿಕ ಕೊಡುಗೆಗಳನ್ನು ರಾಜ್ಯದ ಜನತೆಗೆ ನೆನಪಿಸುವ ಕಾರ್ಯ ಮಾಡಲಾಗಿದೆ ಎಂದು ಹೇಳಿದರು.

ಅರಸು ನಮನ ನೃತ್ಯ ರೂಪಕ ಸೇರಿದಂತೆ ನಾಲ್ಕು ನಾಟಕಗಳನ್ನು ಮಾಡಿ ಅರಸು ರಂಗೋತ್ಸವ ಹೆಸರಿನಲ್ಲಿ ರಾಜ್ಯದ್ಯಾಂತ ರಂಗ ತಂಡಗಳ ಮೂಲಕ ಸಂಚರಿಸಲಾಗಿದೆ, ಇದರಲ್ಲಿ ಮುಖ್ಯವಾಗಿ ಜನಮಿತ್ರ ಅರಸು, ನಾಡ ಒಡನಾಡಿ ಅರಸು, ಅರಸು ಕನಸು ಮತ್ತು ಮುಖ್ಯಮಂತ್ರಿ ಅರಸು ನಾಟಕಗಳನ್ನು ಪ್ರದರ್ಶಿಸಲಾಗಿದೆ.

ಬೆಂಗಳೂರು, ಕಲಬುರಗಿ ಹಾಗೂ ಶಿವಮೊಗ್ಗದಲ್ಲಿ ರಾಜ್ಯಮಟ್ಟದ ವಿಚಾರ ಸಂಕಿರಣ ಹಮ್ಮಿಕೊಳ್ಳಲಾಗಿತ್ತು, ರಾಜ್ಯದ 30 ಜಿಲ್ಲೆಗಳಲ್ಲಿ ಶಾಲಾ ಮಕ್ಕಳಿಗಾಗಿ ಅರಸು ಕುರಿತು ಪ್ರಬಂಧ ಸ್ಪರ್ಧೆ ಹಾಗೂ ಅರಸು–04 ಸ್ಥಭ್ದ ಚಿತ್ರ ಅಭಿಯಾನ ನಡೆಸಲಾಗಿದೆ. ರಾಜ್ಯದ ನಾಲ್ಕು ವಿಭಾಗ ಒಳಗೊಂಡ 'ಸಮತಾ ಸಮಾಜ ನಾಯಕತ್ವ' ಶಿಬಿರಗಳನ್ನು ಯುವಕರಿಗಾಗಿ ಹಮ್ಮಿಕೊಂಡಿದ್ದು ಮಂಗಳೂರು, ಬೀದರ್, ಚಿತ್ರದುರ್ಗ ಮತ್ತು ಕಾಗಿನೆಲೆಯಲ್ಲಿ ನಡೆಸಲಾಗಿತ್ತು.

ಬೆಳಗಾವಿಯಲ್ಲಿ ' ಅರಸು–ಆಬಿವೃದ್ಧಿ ದೃಷ್ಟಿಕೋನ'ದ ಬಗ್ಗೆ ಮಾಧ್ಯಮ ಆಯೋಜಿಸಲಾಗುತ್ತಿದೆ, ನಾಡಿನ ಪ್ರಸಿದ್ಧ ಬರಹಗಾರರಿಂದ ಅರಸು ಯುಗ, ಒಡನಾಡಿ ಅರಸು, ವಿಧಾನ ಮಂಡಲದಲ್ಲಿ ಅರಸು, ಅರಸು ಮತ್ತು ರಾಜಕೀಯ, ಅರಸು ಮತ್ತು ಭೂಸುಧಾರಣೆ, ಅರಸು ನವಯುಗ ನಾಯಕ, ಅರಸು ಯುಗದ ಅರಣ್ಯ ಪರ್ವ, ಕರ್ನಾಟಕದ ಅರಸು, ಕರ್ನಾಟಕಕ್ಕೆ ಶುಭವಾಗಲಿ ಹಾಗೂ ಪ್ರಗತಿ ಪಥ ಕೃತಿಗಳನ್ನು ಬಿಡುಗಡೆ ಮಾಡಲಾಗಿದೆ ಎಂದರು.

ಬಾಬು/ಜಡಿ/ಕೆಎಂ

# ಅರಸು ಕುರಿತು ಸಿನಿಮಾ

**ಬೆಂಗಳೂರು, ಆಗಸ್ಟ್ 18 (ಕರ್ನಾಟಕ ವಾರ್ತೆ)**

ಡಾ. ಬಿ. ಆರ್. ಅಂಬೇಡ್ಕರ್, ಮಹಾತ್ಮ ಗಾಂಧಿ, ಕಿತ್ತೂರು ರಾಣಿ ಚೆನ್ನಮ್ಮ ಕುರಿತು ತೆರೆ ಕಂಡಿರುವ ಚಲನ ಚಿತ್ರಗಳಂತೆ ಡಿ. ದೇವರಾಜ ಅರಸು ಕುರಿತು ಚಲನ ಚಿತ್ರ ನಿರ್ಮಾಣ ಮಾಡಲು ರಾಜ್ಯ ಸರ್ಕಾರ ಉದ್ದೇಶಿಸಿದೆ ಎಂದು ಸಚಿವ ಆಂಜನೇಯ ಹೇಳಿದರು.

ವಿಧಾನ ಸೌಧದ ಸಮ್ಮೇಳನ ಸಭಾಂಗಣದಲ್ಲಿ ಇಂದು ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಖಾತೆ ಸಚಿವ ಹೆಚ್. ಆಂಜನೇಯ ಅವರು ಪತ್ರಿಕಾಗೋಷ್ಠಿಯಲ್ಲಿ ಈ ವಿಷಯವನ್ನು ತಿಳಿಸಿದರು.

ಚಲನಚಿತ್ರ ಮಾಧ್ಯಮ ಅತ್ಯಂತ ಪರಿಣಾಮಕಾರಿ ಮಾಧ್ಯಮವಾಗಿದ್ದು ಅದರ ಮೂಲಕ ಅರಸು ಅವರನ್ನು ಜನರಿಗೆ ಮುಟ್ಟಿಸಲು ಮತ್ತು ದಾಖಲೆಯಾಗಿ ಉಳಿಸಲು ರಾಜ್ಯ ಸರ್ಕಾರ ನಿರ್ಧರಿಸಿದ್ದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಯೋಗದೊಂದಿಗೆ ಅರಸು ಜೀವನ ಕುರಿತು

ಚಲನಚಿತ್ರ ನಿರ್ಮಿಸಲು ಉದ್ದೇಶಿಸಿದ್ದು ಅದಕ್ಕಾಗಿ ಶೀಘ್ರದಲ್ಲಿ ನಾಡಿನ ಅತ್ಯುತ್ತಮ ಪ್ರತಿಭೆಗಳಿಂದ ಕಥೆ, ಚಿತ್ರಕಥೆಗಳನ್ನು ಆಹ್ವಾನಿಸಲಾಗುವುದು, ಅದಕ್ಕಾಗಿ ಸಮಿತಿಯೊಂದನ್ನು ರಚಿಸಿ ಅದರ ಮೂಲಕ ನಿರ್ದೇಶಕರನ್ನು ಆಯ್ಕೆ ಮಾಡಿ ಅತಿ ಶೀಘ್ರದಲ್ಲಿ ಚಲನಚಿತ್ರವೊಂದನ್ನು ನಿರ್ಮಿಸಲಾಗುವುದು ಎಂದರು.

## ಈ ಸಾಲಿನ ಡಿ. ದೇವರಾಜ ಅರಸು ಪ್ರಶಸ್ತಿ

ರಾಜ್ಯ ಸರ್ಕಾರ ನೀಡುವ ಡಿ. ದೇವರಾಜ ಅರಸು 2016ನೇ ಸಾಲಿನ ರಾಜ್ಯಮಟ್ಟದ ಪ್ರಶಸ್ತಿಗಾಗಿ ಮಂಗಳೂರಿನ ಮಾಜಿ ಸಚಿವ ಬಿ.ಎ ಮೋಹಿದ್ದೀನ್ ಆಯ್ಕೆಯಾಗಿದ್ದಾರೆ.

ವೃತ್ತಿಯಲ್ಲಿ ಕೃಷಿಕರಾಗಿರುವ ಮೊಹಿದ್ದೀನ್ ಅವರು ಬಿಎಸ್‌ಸಿ ಮತ್ತು ಡಿಪ್ಲೋಮ ಪದವಿದರರಾಗಿದ್ದು, ಸಮಾಜ ಸೇವಕರಾದ ಗೋವಿಂದೇಗೌಡರೊಂದಿಗೆ ಸೇರಿ ಭೂ ರಹಿತರಿಗೆ ಭೂಮಿ ಒದಗಿಸುವ ಕಾರ್ಯದಲ್ಲಿ ತಮ್ಮನ್ನು ತಾವು ಗುರುತಿಸಿಕೊಂಡಿದ್ದರು.

1978ರ ಚುನಾವಣೆಯಲ್ಲಿ ಬಂಟ್ವಾಳ ವಿಧಾನಸಭಾ ಕ್ಷೇತ್ರದಿಂದ ಸ್ಪರ್ಧಿಸಿ ಶಾಸಕರಾಗಿ ಮೊದಲ ಭಾರಿಗೆ ಆಯ್ಕೆಯಾಗಿದ್ದ ಇವರು 1996ರಲ್ಲಿ ಜೆ.ಎಚ್.ಪಟೇಲ್ ಮಂತ್ರಿ ಮಂಡಲದಲ್ಲಿ ಉನ್ನತ ಶಿಕ್ಷಣ ಸಚಿವರಾಗಿ ಎರಡೂವರೆ ವರ್ಷಗಳ ಕಾಲ ಸೇವೆ ಸಲ್ಲಿಸಿದ್ದರು.

ಬಾಬು/ಜಡಿ/ಕೆಎಂ

# ಅಚ್ಚುಕಟ್ಟು ಪ್ರದೇಶದಲ್ಲಿ ಅರೆ ನೀರಾವರಿ ಬೆಳೆಗಳನ್ನು ಬೆಳೆಯಲು ರೈತರಲ್ಲಿ ಮನವಿ

**ಬೆಂಗಳೂರು, ಆಗಸ್ಟ್ 18 (ಕರ್ನಾಟಕ ವಾರ್ತೆ)**

**ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿನಲ್ಲಿ ಮಲೆನಾಡು ಜಿಲ್ಲೆಗಳಲ್ಲಿ ಇಲ್ಲಿಯವರೆವಿಗೂ ಸಾಮಾನ್ಯಕ್ಕಿಂತ ಕಡಿಮೆ ಮಳೆಯಾಗಿದ್ದು, ದಕ್ಷಿಣ ಒಳನಾಡಿನ ಪ್ರಮುಖ ಜಲಾಶಯಗಳಾದ ಕೃಷ್ಣರಾಜಸಾಗರ, ಹೇಮಾವತಿ ಮತ್ತು ಉತ್ತರ ಒಳನಾಡಿನ ಭದ್ರ, ತುಂಗಭದ್ರ, ಘಟಪ್ರಭ ಮತ್ತು ಮಲಪ್ರಭ ಜಲಾಶಯಗಳಲ್ಲಿ ನೀರಿನ ಹರಿವಿನ ಪ್ರಮಾಣ ಗಣನೀಯವಾಗಿ ಕಡಿಮೆ ಇದ್ದು, ನೀರಿನ ಸಂಗ್ರಹಣೆ ಸಹ ಕಡಿಮೆ ಇರುವ ಹಿನ್ನಲೆಯಲ್ಲಿ ಹೆಚ್ಚು ನೀರು ಬಳಕೆಯಾಗುವ ಬೆಳೆಗಳಾದ ಭತ್ತ, ಕಬ್ಬು ಇತ್ಯಾದಿಗಳ ಬದಲಿಗೆ ಅರೆ ನೀರಾವರಿ ಬೆಳೆಗಳಾದ ರಾಗಿ, ಮುಸುಕಿನ ಜೋಳ, ಸಜ್ಜೆ, ಸಾಮೆ, ನವಣೆ, ಹುರಳಿ, ಅಲಸಂದೆ, ಅವರೆ, ಸೋಯಾ ಅವರೆ, ಸೂರ್ಯಕಾಂತಿ, ಶೇಂಗಾ ಇತ್ಯಾದಿ ಬೆಳೆಗಳನ್ನು ಬೆಳೆಯಲು ರಾಜ್ಯದ ರೈತರಲ್ಲಿ ಮನವಿ ಮಾಡಿರುವ ಅವರು ಸದ್ಯದ ಪರಿಸ್ಥಿತಿಯಲ್ಲಿ ಲಭ್ಯವಿರುವ ನೀರಿನ ಸಮರ್ಪಕ ಬಳಕೆ ಅತ್ಯಗತ್ಯವಾಗಿದ್ದು, ಮುಂದಿನ ಮುಂಗಾರು ಮಳೆ ಪ್ರಾರಂಭವಾಗುವವರೆಗೂ ಈ ನೀರನ್ನು ಕುಡಿಯುವ ನೀರಿಗಾಗಿ ಉಳಿಕೆ ಮಾಡುವುದು ಅನಿವಾರ್ಯವಾದ್ದರಿಂದ ಹಾಲಿ ಲಭ್ಯವಿರುವ ನೀರನ್ನು ಕುಡಿಯುವ ನೀರಿಗಾಗಿ ಮಾತ್ರ ಬಳಸಲು ಉದ್ದೇಶಿಸಲಾಗಿದೆ ಎಂದು ಕೃಷಿ ಆಯುಕ್ತರು**

ಪ್ರಕಟಣೆಯಲ್ಲಿ ತಿಳಿಸಿದ್ದು, ಹೆಚ್ಚಿನ ಮಾಹಿತಿಗಾಗಿ ಹಾಗೂ ಕೃಷಿ ಪರಿಕರಗಳಿಗಾಗಿ ಸಮೀಪದ ಕೃಷಿ ಮತ್ತು ತೋಟಗಾರಿಕೆ ಇಲಾಖೆಗಳ ಅಧಿಕಾರಿಗಳನ್ನು ಸಂಪರ್ಕಿಸುವಂತೆ ತಿಳಿಸಿದ್ದಾರೆ.

ಬಾಬು:ಜಿಪಿಆರ್

# ಕೃಷಿ ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

ಬೆಂಗಳೂರು, ಆಗಸ್ಟ್ 18 (ಕರ್ನಾಟಕ ವಾರ್ತೆ)

2016-17 ನೇ ಸಾಲಿನ ಕೃಷಿ ಪ್ರಶಸ್ತಿ (ಬೆಳೆ ಸ್ಪರ್ಧೆ) ಗಾಗಿ ಭಾಗವಹಿಸಲಿಚ್ಛಿಸುವ ರೈತರುಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ರಾಜ್ಯ, ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಕೃಷಿ ಪ್ರಶಸ್ತಿಗೆ ಅನ್ವಯಿಸುವಂತೆ ನಿಗದಿತ ನಮೂನೆಯಲ್ಲಿ ಒಂದೇ ಅರ್ಜಿಯನ್ನು ಸಲ್ಲಿಸಬೇಕು. ಪ್ರವೇಶ ಶುಲ್ಕ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗದ ರೈತರಿಗೆ ರೂ 25/-, ಸಾಮಾನ್ಯ ರೈತರಿಗೆ ರೂ. 100/-

2016 ರ ಮುಂಗಾರು ಹಂಗಾಮಿನ ಬೆಳೆ ಸ್ಪರ್ಧೆಗೆ ಅರ್ಜಿ ಸಲ್ಲಿಸಲು ಆಗಸ್ಟ್ 31 ಕೊನೆಯ ದಿನವಾಗಿರುತ್ತದೆ. ಸ್ಪರ್ಧಿಸಬಹುದಾದ ಬೆಳೆಗಳ ವಿವರಗಳು, ಅರ್ಜಿ ನಮೂನೆ ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಹತ್ತಿರದ ರೈತ ಸಂಪರ್ಕ ಕೇಂದ್ರದ ವಿಸ್ತರಣಾ ಕಾರ್ಯಕರ್ತರನ್ನಾಗಲೀ ಅಥವಾ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರನ್ನಾಗಲೀ ಸಂಪರ್ಕಿಸಬಹುದಾಗಿದೆ ಎಂದು ಇಲಾಖೆ ಪ್ರಕಟಣೆ ತಿಳಿಸಿದೆ.

ಬಾಬು:ಜಿಪಿಆರ್.

# ವಾರ್ತಾ ಇಲಾಖೆಗೆ ವಿವರ ನೀಡಿ

ಬೆಂಗಳೂರು, ಆಗಸ್ಟ್ 18 (ಕರ್ನಾಟಕ ವಾರ್ತೆ)

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಚಲನಚಿತ್ರಗಳ ಚಿತ್ರೀಕರಣದ ಸ್ಥಳಗಳು ಚಿತ್ರೀಕರಣ ನಂತರದ ಕಾರ್ಯಗಳು ( Post Production Works like DI, SONG RECORDING, DUBBING, EDITING, DTS) ಹಾಗೂ ಹೊರಾಂಗಣ ಘಟಕಗಳನ್ನು ಹೊಂದಿರುವ ಸಂಸ್ಥೆಗಳ ವಿವರಗಳನ್ನು ಸಂಗ್ರಹಿಸಲಾಗುತ್ತಿದೆ.

ಆದುದರಿಂದ ರಾಜ್ಯದಲ್ಲಿರುವ ಚಲನಚಿತ್ರಗಳ ಖಾಸಗಿ ಚಿತ್ರೀಕರಣದ ಸ್ಥಳಗಳು ಚಿತ್ರೀಕರಣ ನಂತರದ ಕಾರ್ಯಗಳು ((Post Production Works like DI, SONG

**RECORDING, DUBBING, EDITING, DTS)** ಹಾಗೂ ಹೊರಾಂಗಣ ಘಟಕಗಳ ಹೊಂದಿರುವ ಸಂಸ್ಥೆಗಳ ವಿವರಗಳನ್ನು ನಿಗದಿತ ಅರ್ಜಿ ನಮೂನೆಯಲ್ಲಿ ಭರ್ತಿಮಾಡಿ ಸಲ್ಲಿಸಬಹುದಾಗಿದೆ. ಅರ್ಜಿ ನಮೂನೆಗಳನ್ನು ಇಲಾಖೆಯ ಅಂತರ್ಜಾಲ **www.karnatakavarthe.org** ನಿಂದ ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿದೆ.

ಬಾಬು:ಜಿಪಿಆರ್.

# ಎಸ್.ಸಿ.ಪಿ./ಟಿ.ಎಸ್.ಪಿ. ಯೋಜನೆಯಡಿ ಪುಸ್ತಕಗಳ ಆಯ್ಕೆ

ಬೆಂಗಳೂರು, ಆಗಸ್ಟ್ 18 (ಕರ್ನಾಟಕ ವಾರ್ತೆ)

ಸಾರ್ವಜನಿಕರ ಗ್ರಂಥಾಲಯ ಇಲಾಖೆಯ ಅಧೀನ ಗ್ರಂಥಾಲಯಗಳ ಪರಿಶಿಷ್ಟ ಜಾತಿ ಉಪಯೋಜನೆ ಮತ್ತು ಗಿರಿಜನ ಉಪಯೋಜನೆ ಯೋಜನೆಯಡಿಯಲ್ಲಿ 227 ಗ್ರಂಥಾಲಯಗಳಿಗೆ ಹಾಗೂ ಆರ್‌ಆರ್‌ಆರ್‌ಎಲ್‌ಎಫ್ ಸಮಪಾಲುನಿಧಿ ಯೋಜನೆಯಡಿಯಲ್ಲಿ (ಆಂಗ್ಲ ಪುಸ್ತಕಗಳು ಮಾತ್ರ) 176 ತಾಲ್ಲೂಕು ಗ್ರಂಥಾಲಯಗಳಿಗೆ 2016 ರಲ್ಲಿ ಪ್ರಕಟಣೆಯಾದ ಪರಾಮರ್ಶನ, ಸ್ಪರ್ಧಾತ್ಮಕ, ಪಠ್ಯ ಪುಸ್ತಕ ಹಾಗೂ ಮಕ್ಕಳ ಪುಸ್ತಕ, ವಿಶ್ವಕೋಶಗಳು, ಕಾನೂನು, ವಿಜ್ಞಾನ, ತಂತ್ರಜ್ಞಾನ ವಿಷಯಕ್ಕೆ ಸಂಬಂಧಿಸಿದ ಕನ್ನಡ ಹಾಗೂ ಆಂಗ್ಲ ಭಾಷಾ ಪುಸ್ತಕಗಳನ್ನು ಖರೀದಿಸಲು ಲೇಖಕ, ಲೇಖಕ-ಪ್ರಕಾಶಕ, ಪ್ರಕಟಣ ಸಂಸ್ಥೆಗಳು ಹಾಗೂ ವಿತರಕರಿಂದ ಪುಸ್ತಕಗಳನ್ನು ಆಯ್ಕೆಗೆ ಸಲ್ಲಿಸುವಂತೆ ಕೋರಿದೆ.

ಪುಸ್ತಕ ಸ್ವೀಕೃತಿಯನ್ನು ಯೋಜನಾ ವಿಭಾಗ, ನಿರ್ದೇಶನಾಲಯ, ಸಾರ್ವಜನಿಕ ಗ್ರಂಥಾಲಯ ಇಲಾಖೆ, ವಿಶ್ವೇಶ್ವರಯ್ಯ ಮುಖ್ಯ ಗೋಪುರ, 4ನೇ ಮಹಡಿ, ಡಾ. ಅಂಬೇಡ್ಕರ್ ವೀಧಿ, ಬೆಂಗಳೂರು – 560 001 ಇಲ್ಲಿಗೆ ಖುದ್ದಾಗಿ ಅಥವಾ ನೋಂದಾಯಿತ ಅಂಚೆ ಮುಖಾಂತರ ಸೆಪ್ಟೆಂಬರ್ 25 ರೊಳಗೆ ತಲುಪುವಂತೆ ಸಲ್ಲಿಸಿ ಸ್ವೀಕೃತಿಯನ್ನು ಪಡೆಯಬೇಕು.

ಬಾಬು:ಜಿಪಿಆರ್.

# ಪುಸ್ತಕಗಳ ಆಯ್ಕೆಗೆ ಅರ್ಜಿ ಸಲ್ಲಿಸಿ

ಬೆಂಗಳೂರು, ಆಗಸ್ಟ್ 18 (ಕರ್ನಾಟಕ ವಾರ್ತೆ)

2016 ನೇ ಜನವರಿ 1 ರಿಂದ ಜೂನ್ 30 ರವರೆಗೆ ಪ್ರಥಮ ಮುದ್ರಣವಾಗಿ ಪ್ರಕಟಗೊಂಡಸಾಹಿತ್ಯ/ಲಲಿತಕಲೆ/ವಿಜ್ಞಾನ/ಮಾನವಿಕ/ವೈದ್ಯಕೀಯ/ತಾಂತ್ರಿಕ/ಸ್ಪರ್ಧಾತ್ಮಕ/ ಪರಾಮರ್ಶನ ಕೃತಿಗಳು ಹಾಗೂ ಮಕ್ಕಳ ಸಾಹಿತ್ಯ/ನವಸಾಕ್ಷರರ ಕೃತಿಗಳೂಇತ್ಯಾದಿ ವಿಷಯಗಳ ಕನ್ನಡ/ಆಂಗ್ಲ/ಇತರೆ ಭಾರತೀಯ ಭಾಷೆಯ ಗ್ರಂಥಗಳ ಆಯ್ಕೆ ಲೇಖಕರು, ಲೇಖಕ–

ಪ್ರಕಾಶಕರು, ಪ್ರಕಟಣಾ ಸಂಸ್ಥೆಗಳು ಹಾಗೂ ವಿತರಕರಿಂದ ಮೊದಲನೇ ಹಂತದಲ್ಲಿ ಪುಸ್ತಕಗಳನ್ನು ಆಹ್ವಾನಿಸಿದೆ.

2016 ನೇ ಜನವರಿ 1 ರಿಂದ ಜೂನ್ 30 ರವರೆಗೆ ಪ್ರಥಮ ಮುದ್ರಣವಾಗಿ ಪ್ರಕಟವಾದ ಪುಸ್ತಕಗಳನ್ನು ಗ್ರಂಥಸ್ವಾಮ್ಯ ವಿಭಾಗ, ರಾಜ್ಯ ಕೇಂದರ ಗ್ರಂಥಾಲಯ, ಕಬ್ಬನ್ ಉದ್ಯಾನವನ, ಬೆಂಗಳೂರು ಇಲ್ಲಿ ಜೂನ್ 30 ರ ಒಳಗಾಗಿ ಕಾಪಿರೈಟ್ ಮಾಡಿಸಿಕೊಂಡಿರತಕ್ಕದ್ದು. ಈ ಅವಧಿಯಲ್ಲಿ ಕಾಪಿರೈಟ್ ಮಾಡಿಸಿರುವ ಪುಸ್ತಕಗಳಣ್ನು ಆಯ್ಕೆಗಾಗಿ ಅರ್ಜಿಯೊಂದಿಗೆ ಪುಸ್ತಕದ ಒಂದು ಪ್ರತಿಯನ್ನು (ನೋಂದಣಿ ಪತ್ರದ ಪ್ರತಿಯೊಂದಿಗೆ) ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ವಿಶ್ವೇಶ್ವರಯ್ಯ ಮುಖ್ಯ ಗೋಪುರ, 4ನೇ ಮಹಡಿ, ಡಾ. ಬಿ. ಆರ್. ಅಂಬೇಡ್ಕರ್ ವೀಧಿ, ಬೆಂಗಳೂರು – 560 001 ಇಲ್ಲಿಗೆ ಅಕ್ಟೋಬರ್ 1 ರೊಳಗಾಗಿ ಸಲ್ಲಿಸಬೇಕು.

ಬಾಬು:ಜಿಪಿಆರ್.

# ದಿವಂಗತ ದೇವರಾಜ ಅರಸುರವರ 101ನೇ ಜನ್ಮ ದಿನಾಚರಣೆ

ಬೆಂಗಳೂರು, ಆಗಸ್ಟ್ 18 (ಕರ್ನಾಟಕ ವಾರ್ತೆ)

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ದಿವಂಗತ ದೇವರಾಜ ಅರಸು ಜನ್ಮ ಶತಮಾನೋತ್ಸವ ಸಮಿತಿಯ ಸಂಯುಕ್ತಾಶ್ರಯದಲ್ಲಿ ಆಗಸ್ಟ್ 20 ರಂದು ಬೆಳಿಗ್ಗೆ 11–00 ಗಂಟೆಗೆ ನಗರದ ಕಂಠೀರವ ಒಳಾಂಗಣ ಕ್ರೀಡಾಂಗಣ, ಬೆಂಗಳೂರು ಇಲ್ಲಿ ದಿವಂಗತ ದೇವರಾಜ ಅರಸುರವರ 101ನೇ ಜನ್ಮ ದಿನಾಚರಣೆ ಹಾಗೂ ಜನ್ಮ ಶತಮಾನೋತ್ಸವ ಸಮಾರೋಪ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ

ಅಂದು ಬೆಳಿಗ್ಗೆ 10.40 ಗಂಟೆಗೆ ವಿಧಾನಸೌಧದ ಪಶ್ಚಿಮ ದ್ವಾರದಲ್ಲಿರುವ ಡಿ. ದೇವರಾಜ ಅರಸು ಅವರ ಪ್ರತಿಮೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೇರಿದಂತೆ ಅನೇಕ ಗಣ್ಯರು ಮಾಲಾರ್ಪಣೆ ಮಾಡಲಿದ್ದಾರೆ.

ಈ ಸಮಾರಂಭವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಉದ್ಘಾಟಿಸಲಿದ್ದಾರೆ. ಸಮಾರಂಭದ ಅಧ್ಯಕ್ಷತೆಯನ್ನು ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವ ಹೆಚ್. ಆಂಜನೇಯ ಅವರು ವಹಿಸುವರು.

ಸಮಾರಂಭದಲ್ಲಿ ಕೇಂದ್ರದ ಸಚಿವರು, ರಾಜ್ಯ ಸಚಿವರು ವಿಧಾನಸಭೆ ಅಧ್ಯಕ್ಷರು, ಕರ್ನಾಟಕ ವಿಧಾನ ಪರಿಷತ್ ಸಭಾಪತಿಯವರು ಸೇರಿದಂತೆ ವಿಧಾನಸಭೆ ಸದಸ್ಯರು, ವಿಧಾನ

**ಪರಿಷತ್ ಸದಸ್ಯರು, ಲೋಕಸಭೆ ಹಾಗೂ ರಾಜಸಭಾ ಸದಸ್ಯರು ಸೇರಿದಂತೆ ಅನೇಕ ಗಣ್ಯರು ಪಾಲ್ಗೊಳ್ಳುವರು.**

**ಬಾಬು:ಕೆಎಂ**